ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ

ಸಂಖ್ಯೆ:ಕಶಾಪ&ಮೌನಿಮ/ಮೌಮಾವಿ/ಮೌಮಾನೊ/ 2023-24 ದಿನಾಂಕ:4-12-2023

-::ಸುತ್ತೋಲೆ::-

ವಿಷಯ: 2024ರ ದ್ವಿತೀಯ ಪಿಯುಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕೆ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ/ಉಪನ್ಯಾಸಕರ ಮಾಹಿತಿಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಜಾಲತಾಣದ PU EXAM PORTAL LOGIN ನಲ್ಲಿ ಕಡ್ಡಾಯವಾಗಿ ನಮೂದಿಸುವ ಬಗ್ಗೆ.

*-*-*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024ರ ದ್ವಿತೀಯ ಪಿ.ಯು.ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕೆ ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ/ಎಲ್ಲಾ ಉಪನ್ಯಾಸಕರ ಮಾಹಿತಿಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಜಾಲತಾಣ PU EXAM PORTAL LOGIN ನಲ್ಲಿ ಕಡ್ಡಾಯವಾಗಿ ದಿನಾಂಕ 30.12.2023 ರೊಳಗೆ ನಮೂದಿಸಲು, ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಕಾಲೇಜುಗಳ ಪ್ರಾಂಶುಪಾಲರಿಗೆ ಈ ಮೂಲಕ ಸೂಚಿಸಿದೆ.

ಸದರಿ ಮಾಹಿತಿಯನ್ನು ನಮೂದಿಸಲು ಪ್ರಾಂಶುಪಾಲರು ಪಾಲಿಸಬೇಕಾದ ಕ್ರಮಗಳ ವಿವರ ಈ ಕೆಳಗಿನಂತಿದೆ.

1. EVALUATORS DETAILS ಎಂಬ ಮೆನ್ಯೂ ನಲ್ಲಿ ತಮ್ಮ ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ ಹಾಗೂ ಎಲ್ಲಾ ಉಪನ್ಯಾಸಕರ ಮಾಹಿತಿಯನ್ನು ಹೊಸದಾಗಿ ನಮೂದಿಸುವುದು.
2. ಪ್ರಾಂಶುಪಾಲರ/ಉಪನ್ಯಾಸಕರ ಮಾಹಿತಿಯಲ್ಲಿ ಹೆಸರು, ಬೋಧಿಸುವ ವಿಷಯ, ಉಪನ್ಯಾಸಕರಾಗಿ ಸೇವೆಗೆ ಸೇರಿದ ದಿನಾಂಕ ( ಪ್ರೌಢಶಾಲೆಯಿಂದ ಉಪನ್ಯಾಸಕರಾಗಿ ಬಡ್ತಿ ಹೊಂದಿದ ಉಪನ್ಯಾಸಕರು, ಉಪನ್ಯಾಸಕರಾಗಿ ಬಡ್ತಿ ಹೊಂದಿದ ದಿನಾಂಕ ನಮೂದಿಸುವುದು) ,ಬ್ಯಾಂಕ್ ಖಾತೆ ವಿವರ ಇತ್ಯಾದಿ ವಿವರಗಳನ್ನು ನಮೂದಿಸಿ, ಬ್ಯಾಂಕ್ ಖಾತೆ ಹಾಗೂ IFSC CODE ಹೊಂದಿರುವ ಪಾಸ್ ಪುಸ್ತಕದ ಮುಖಪುಟದ ಪ್ರತಿಯನ್ನು ಕಡ್ಡಾಯವಾಗಿ UPLOAD ಮಾಡಿ ನಮೂದಿಸಿದ ಮಾಹಿತಿಗಳನ್ನು ಖಚಿತ ಪಡಿಸಿಕೊಂಡು SUBMIT ಮಾಡುವುದು.
3. ಪ್ರತಿ ಪ್ರಾಂಶುಪಾಲರ/ಉಪನ್ಯಾಸಕರ RECEPIENT ID ನಮೂದಿಸುವುದು ಕಡ್ಡಾಯವಾಗಿರುತ್ತದೆ. RECEPIENT ID ಇಲ್ಲದಿದ್ದಲ್ಲಿ ತಮ್ಮ ಜಿಲ್ಲೆಯ ಉಪನಿರ್ದೇಶಕರ ಕಛೇರಿ ಅಥವಾ ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರ (DDO) ಮುಖಾಂತರ RECEPIENT ID ಸೃಜಿಸಿ ಸದರಿ ಮಾಹಿತಿಯನ್ನು ನಮೂದಿಸುವುದು.
4. BANK ACCOUNT NUMBER ಕೊಡುವಾಗ KARNATAKA STATEನಲ್ಲಿ ಇರುವ BANKಗಳ ACCOUNT NUMBER ಮಾತ್ರ ನೀಡುವುದು ಹಾಗೂ SOCIETY, PRIVATE BANK ACCOUNT NUMBER ಗಳನ್ನು ನೀಡಬಾರದು.
5. 2023-24ನೇ ಸಾಲಿಗೆ ಕಡ್ಡಾಯವಾಗಿ ಎಲ್ಲಾ ಪ್ರಾಂಶುಪಾಲರು/ಉಪನ್ಯಾಸಕರು ಹೊಸದಾಗಿ REGISTRATION ಮಾಡುವುದು.

ಮೇಲೆ ಸೂಚಿಸಿರುವ ಎಲ್ಲಾ ಪ್ರಕ್ರಿಯೆಗಳನ್ನು ಕಾಲೇಜಿನ ಪ್ರಾಂಶುಪಾಲರು ಖುದ್ದಾಗಿ ತಮ್ಮ ಲಾಗಿನ್ ನಲ್ಲಿ ನಿರ್ವಹಿಸುವುದು. ನಮೂದಿಸಿರುವ ಮಾಹಿತಿಗಳಲ್ಲಿ ಯಾವುದೇ ವ್ಯತ್ಯಾಸಗಳು ಕಂಡುಬಂದಲ್ಲಿ ಕಾಲೇಜಿನ ಪ್ರಾಂಶುಪಾಲರೇ ನೇರ ಹೊಣೆಗಾರರಾಗುತ್ತಾರೆ. ಇದರಿಂದ ಮೌಲ್ಯಮಾಪನ ಕಾರ್ಯಕ್ಕೆ ನೇಮಿಸುವ ಪ್ರಕ್ರಿಯೆಯಲ್ಲಿ ಯಾವುದೇ ವ್ಯತ್ಯಾಸಗಳು ಕಂಡುಬಂದಲ್ಲಿ ಸದರಿ ಕಾಲೇಜಿನ ಪ್ರಾಂಶುಪಾಲರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

2024 ನೇ ಸಾಲಿನ ದ್ವಿತೀಯ ಪಿ.ಯು.ಸಿ ಪರೀಕ್ಷಾ ಕಾರ್ಯಗಳ ಸಂಬಂಧ ಎಲ್ಲಾ ಮಾಹಿತಿಗಳಿಗೆ ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಕಾಲೇಜುಗಳ ಪ್ರಾಂಶುಪಾಲರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ PU EXAM PORTAL ನ ಲಾಗಿನ್ ನ್ನು ಬಳಸುವುದು.

ನಿರ್ದೇಶಕರು (ಪಿಯು ಪರೀಕ್ಷೆ)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ.

ಪ್ರತಿಗಳನ್ನು:

1. ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಕಾಲೇಜುಗಳ ಎಲ್ಲಾ ಪ್ರಾಂಶುಪಾಲರಿಗೆ ಸೂಕ್ತ ಕ್ರಮಕ್ಕಾಗಿ.
2. ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.